All India Radio: Bangalore
Regional Bulletin In Kannada
09.09.2025 / 2.30p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಉಪರಾಷ್ಟ್ರಪತಿ ಚುನಾವಣೆ; ಪ್ರಧಾನಿ, ಸಚಿವರು, ವಿರೋಧ ಪಕ್ಷದ ನಾಯಕರು ಸೇರಿದಂತೆ ಹಲವು ಸಂಸದರಿಂದ ಮತ ಚಲಾವಣೆ
- ವಿಮದ್ದೂರು ಗಲಭೆ ಪ್ರಕರಣ; ತಪ್ಪಿತಸ್ಥರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ - ಗೃಹ ಸಚಿವ ಡಾ. ಜಿ.ಪರಮೇಶ್ವರ್
- ಮದ್ದೂರು ಬಂದ್ ಯಶಸ್ವಿ; ಬಿಜೆಪಿಯಿಂದ ಸತ್ಯ ಶೋಧನಾ ಸಮಿತಿ ರಚನೆ
- ಜಿಎಸ್‌ಟಿ ಇಳಿಕೆಯಿಂದ ಮಧ್ಯಮ ವರ್ಗ ಮತ್ತು ಕೂಲಿ ಕಾರ್ಮಿಕರಿಗೆ ಅನುಕೂಲ - ತೆರಿಗೆ ಸಲಹೆಗಾರರ ಒಕ್ಕೂಟ ಸ್ವಾಗತ

*><><><*><><><*

ಉಪರಾಷ್ಟ್ರಪತಿ ಚುನಾವಣೆಗೆ ಮತದಾನ ಪ್ರಕ್ರಿಯೆ ಹೊಸ ಸಂಸತ್ತು ಭವನದಲ್ಲಿ ನಡೆಯುತ್ತಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ರಾಜನಾಥ್ ಸಿಂಗ್, ಅಶ್ವಿನಿ ವೈಷ್ಣವ್, ಜಿತೇಂದ್ರ ಸಿಂಗ್, ಪ್ರಲ್ಹಾದ್ ಜೋಶಿ, ರಾಜ್ಯಸಭಾ ಉಪಸಭಾಪತಿ ಹರಿವಂಶ್, ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ, ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಹಿರಿಯ ಕಾಂಗ್ರೆಸ್ ಸಂಸದೆ ಸೋನಿಯಾ ಗಾಂಧಿ, ಡಿಎಂಕೆ ಸಂಸದ ದಯಾನಿಧಿ ಮಾರನ್, ಸಮಾಜವಾದಿ ಪಕ್ಷದ ರಾಮ್‌ಗೋಪಾಲ್ ಯಾದವ್, ಜೆಡಿಯುನ ಸಂಜಯ್ ಝಾ ಈಗಾಗಲೇ ಮತಚಲಾಯಿಸಿದ್ದು, ಲೋಕಸಭೆ ಮತ್ತು ರಾಜ್ಯಸಭೆಯ ಇತರ ಸದಸ್ಯರು ಮತ ಚಲಾಯಿಸುತ್ತಿದ್ದಾರೆ. ಮತದಾನ ನೂತನ ಸಂಸತ್ ಭವನದಲ್ಲಿ ಬೆಳಿಗ್ಗೆ ೧೦ ಗಂಟೆಗೆ ಆರಂಭವಾಗಿದ್ದು, ಸಂಜೆ ೫ ಗಂಟೆವರೆಗೆ ಮುಂದುವರಿಯಲಿದೆ. ಎನ್‌ಡಿಎ ಅಭ್ಯರ್ಥಿಯಾಗಿ ಮಹಾರಾಷ್ಟ್ರ ರಾಜ್ಯಪಾಲರಾದ ಸಿ.ಪಿ. ರಾಧಾಕೃಷ್ಣನ್ ಹಾಗೂ ಐಎನ್‌ಡಿಐ ಮೈತ್ರಿಕೂಟದ ಅಭ್ಯರ್ಥಿಯಾಗಿ ಸುಪ್ರೀಂಕೋರ್ಟ್‌ನ ಮಾಜಿ ನ್ಯಾಯಾಮೂರ್ತಿ ಬಿ. ಸುದರ್ಶನ ರೆಡ್ಡಿ ಕಣದಲ್ಲಿದ್ದಾರೆ. ಮತ ಎಣಿಕೆ ಪ್ರಕ್ರಿಯೆ ಸಂಜೆ ೬ ಗಂಟೆಯ ನಂತರ ಆರಂಭವಾಗಲಿದೆ.

*><><><*><><><*

ಮದ್ದೂರು ಗಲಭೆ ವಿಚಾರದಲ್ಲಿ ತಪ್ಪಿತಸ್ಥರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಯಾವುದೇ ಕಾರಣಕ್ಕೂ ಯಾರನ್ನೂ ರಕ್ಷಿಸಲಾಗುವುದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಡೀ ರಾಜ್ಯದಲ್ಲಿ ಗಣೇಶೋತ್ಸವಗಳು ಶಾಂತಿ ಮತ್ತು ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ನಡೆದಿದ್ದು, ಸಣ್ಣ ಊರಿನಲ್ಲಿ ಇಂತಹ ಘಟನೆಗಳು ನಡೆದರೆ ಸಹಿಸಲು ಆಗುವುದಿಲ್ಲ. ಮದ್ದೂರು ಗಲಭೆಯ ನಂತರ ಪ್ರಚೋದನೆ ನೀಡುವವರ ಮೇಲೆ ಕಣ್ಣಿಡಲಾಗಿದೆ, ಶಾಂತಿ ಸುವ್ಯವಸ್ಥೆ ಕಾಪಾಡಲು ಎಲ್ಲರೂ ಸಹಕಾರ ನೀಡಬೇಕೆಂದು ಅವರು ಮನವಿ ಮಾಡಿದರು. ಸರ್ಕಾರ ಯಾರನ್ನು ಓಲೈಸಲು ಹೋಗುವುದಿಲ್ಲ, ಮದ್ದೂರು ಪ್ರಕರಣದಲ್ಲಿ ಯಾರೇ ತಪ್ಪು ಮಾಡಿದ್ದರೂ ಕಠಿಣ ಕ್ರಮ ಕೈಗೊಳ್ಳಲಾಗುವುದು, ವಿರೋಧ ಪಕ್ಷಗಳು ಸಹ ಶಾಂತಿ ಸುವ್ಯವಸ್ಥೆ ಕಾಪಾಡಲು ಸಹಕಾರ ನೀಡಬೇಕು ಎಂದು ಸಚಿವರು ತಿಳಿಸಿದರು.

ಧ್ವನಿ: ಡಾ.ಜಿ.ಪರಮೇಶ್ವರ್. (  30 ಸೆಕೆಂಡುಗಳು)

*><><><*><><><*

ಮಂಡ್ಯ ಜಿಲ್ಲೆಯ ಮದ್ದೂರು ನಗರದಲ್ಲಿ ಗಣೇಶ ಮೂರ್ತಿ ವಿಸರ್ಜನೆ ಸಂದರ್ಭದಲ್ಲಿ ನಡೆದ ಕಲ್ಲು ತೂರಾಟ ಹಾಗೂ ಪ್ರತಿಭಟನೆ ಸಂದರ್ಭದಲ್ಲಿ ನಡೆದ ಲಾಠಿ ಚಾರ್ಜ್ ಖಂಡಿಸಿ ಇಂದು ಕರೆ ನೀಡಿದ್ದ ಮದ್ದೂರು ನಗರ ಬಂದ್ ಸಂಪೂರ್ಣ ಯಶಸ್ವಿಯಾಗಿದೆ. ಅಂಗಡಿ ಮುಗ್ಗಟ್ಟುಗಳು ಮುಚ್ಚಿದ್ದು, ನಗರದಾದ್ಯಂತ ನಿಷೇಧಾಜ್ಞೆ ಮುಂದುವರೆದಿದೆ. ಬೆಳಿಗ್ಗೆ ಜಿಲ್ಲಾಧಿಕಾರಿ ಕುಮಾರ ಮತ್ತು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಸೂಕ್ಷ್ಮ ಸ್ಥಳದಲ್ಲಿ ಪರಿಸ್ಥಿತಿ ಅವಲೋಕಿಸಿದ್ದಾರೆ. ಮುನ್ನೆಚ್ಚರಿಕೆಯ ಕ್ರಮವಾಗಿ ನಗರದಾದ್ಯಂತ ೧೫೦೦ ಕ್ಕೂ ಅಧಿಕ ಪೊಲೀಸರನ್ನು ನಿಯೋಜಿಸಿದ್ದು, ಯಾವುದೇ ಅಹಿತಕರ ಘಟನೆ ನಡೆಯದಂತೆ ಕ್ರಮ ವಹಿಸಿದ್ದಾರೆ. ಈಗಾಗಲೇ ೨೧ ಮಂದಿ ಆರೋಪಿಗಳನ್ನು ನ್ಯಾಯಾಂಗ ವಶಕ್ಕೆ ನೀಡಲಾಗಿದೆ. ಆರೋಪಿಗಳ ಪರ ವಕಾಲತ್ತು ವಹಿಸದಿರಲು ತಾಲ್ಲೂಕಿನ ವಕೀಲರು ನಿರ್ಧರಿಸಿದ್ದಾರೆ. ಮಧ್ಯಾಹ್ನ ೩ ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅಧ್ಯಕ್ಷತೆಯಲ್ಲಿ ಸಮಾಜದ ಮುಖಂಡರ ನಡುವೆ ಶಾಂತಿ ಸಭೆ ನಡೆಯಲಿದೆ.

*><><><*><><><*

ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ಗಣೇಶ ವಿಸರ್ಜನೆ ಸಂದರ್ಭದಲ್ಲಿ ನಡೆದ ಅಹಿತಕರ ಘಟನೆಯ ಕುರಿತು ಬಿಜೆಪಿ ವತಿಯಿಂದ ಅಶ್ವತ್ಥ್ ನಾರಾಯಣ ಅವರ ನೇತೃತ್ವದ ೭ ಜನ ಸದಸ್ಯರ ಸತ್ಯ ಶೋಧನಾ ತಂಡವನ್ನು ರಚಿಸಲಾಗಿದೆ. ಈ ಸಮಿತಿಯು ಘಟನಾ ಸ್ಥಳಕ್ಕೆ ತೆರಳಿ ಒಂದು ವಾರದೊಳಗೆ ವರದಿ ಸಲ್ಲಿಸಲಿದೆ ಎಂದು ಪ್ರಕಟಣೆ ತಿಳಿಸಿದೆ.

*><><><*><><><*

ಕೇಂದ್ರ ಸರ್ಕಾರ ವಾಹನಗಳ ಮೇಲೆ ಮತ್ತು ಆಹಾರ ಪದಾರ್ಥಗಳ ಮೇಲಿನ ಜಿಎಸ್‌ಟಿ ಇಳಿಕೆಯಿಂದ ಮಧ್ಯಮ ವರ್ಗ ಮತ್ತು ಕೂಲಿ ಕಾರ್ಮಿಕರಿಗೆ ಅನುಕೂಲವಾಗಿದೆ ಎಂದು ಕರ್ನಾಟಕ ರಾಜ್ಯ ತೆರಿಗೆ ಸಲಹೆಗಾರರ ಒಕ್ಕೂಟದ ರಾಜ್ಯ ಸಂಚಾಲಕ ದಾವಣಗೆರೆಯ ರಾಧೇಶ್ ಜಂಬಗಿ ಹೇಳಿದ್ದಾರೆ. ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿರುವ ಅವರು, ನಾಲ್ಕು ಚಕ್ರ ಮತ್ತು ದ್ವಿಚಕ್ರ ವಾಹನಗಳ ಮೇಲಿನ ಜಿಎಸ್‌ಟಿ ತೆರಿಗೆ ಇಳಿಕೆಯಿಂದ ಮಧ್ಯಮ ವರ್ಗದ ಜನರಲ್ಲಿ ತಾವೂ ಕೂಡ ವಾಹನ ಖರೀದಿಸಬಹುದು ಎಂಬ ಆಶಾಭಾವನೆ ಮೂಡಿದೆ. ಆಹಾರ ಪದಾರ್ಥಗಳ ಮೇಲಿನ ಜಿಎಸ್‌ಟಿ ಇಳಿಕೆಯಿಂದ ಕೂಲಿ ಕಾರ್ಮಿಕರು, ಕಟ್ಟಡ ಕಾರ್ಮಿಕರಿಗೆ ಸಾಕಷ್ಟು ಅನುಕೂಲವಾಗಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಜಂಬಗಿ ರಾಧೇಶ್, ( 30 ಸೆಕೆಂಡುಗಳು)

*><><><*><><><*

ಒಂದು ಸಾವಿgದ ೩೨೫ ಕೋಟಿ ರೂಪಾಯಿ ವೆಚ್ಚದ ತಡಸ, ಆಣೂರು ಹಾಗೂ ಹಂಸಭಾವಿ ಬಹುಗ್ರಾಮ ಕುಡಿಯುವ ನೀರು ಪೂರೈಕೆ ಯೋಜನೆ ಅನುಷ್ಠಾನದಿಂದ ೪೫೧ ಜನವಸತಿ ಪ್ರದೇಶಗಳಿಗೆ ನೀರು ಪೂರೈಕೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ಹೇಳಿದ್ದಾರೆ. ಹಾವೇರಿ ಜಿಲ್ಲಾಧಿಕಾರಿ ಕಚೇರಿ ಪ್ರಾಂಗಣದಲ್ಲಿಂದು ಉಸ್ತುವಾರಿ ಸಚಿವರಾಗಿ ಜಿಲ್ಲೆಯ ಅಭಿವೃದ್ಧಿಗೆ ಕೈಗೊಂಡ ಯೋಜನೆಗಳ ಕೈಪಿಡಿಯನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಈ ಮೂರೂ ಯೋಜನೆಗಳು ಅನುಷ್ಠಾನ ಹಂತಕ್ಕೆ ಬಂದಿದ್ದು, ಟ್ರಯಲ್ ರನ್ ಆಗಿದೆ. ತಡಸ ಬಹುಗ್ರಾಮ ಯೋಜನೆಯಿಂದ ಹಾನಗಲ್ ತಾಲೂಕಿನ ೧೧೨, ಹಾನಗಲ್ ತಾಲೂಕಿನ ೩೭, ಶಿಗ್ಗಾವಿ ತಾಲೂಕಿನ ೯೩ ಹಾಗೂ ಸವಣೂರು ತಾಲೂಕಿನ ೪೯ ಗ್ರಾಮಗಳು, ಆಣೂರು ಯೋಜನೆಯಿಂದ ಬ್ಯಾಡಗಿ ತಾಲೂಕಿನ ೨೦, ರಾಣೆಬೆನ್ನೂರು ತಾಲೂಕಿನ ೧೭ ಹಾಗೂ ಹಿರೇಕೆರೂರು ತಾಲೂಕಿನ ಒಂದು ಗ್ರಾಮ ಹಾಗೂ ಹಂಸಭಾವಿ ಯೋಜನೆಯಿಂದ ಹಿರೇಕೆರೂರು ತಾಲೂಕಿನ ೬೯, ರಟ್ಟೀಹಳ್ಳಿ ತಾಲೂಕಿನ ೨೪ ಮತ್ತುಜ ಹಾನಗಲ್ ತಾಲೂಕಿನ ೧೬ ಗ್ರಾಮಗಳಿಗೆ ನೀರು ಪೂರೈಕೆಯಾಗಲಿದೆ ಎಂದರು. ಹಾವೇರಿ ನಗರಕ್ಕೆ ನೀರು ಸರಬರಾಜು ಹಾಗೂ ಗುತ್ತಲ ಮತ್ತು ರಟ್ಟಿಹಳ್ಳಿ ಪಟ್ಟಣಗಳಿಗೆ ಒತ್ತಡಯುಕ್ತ ನೀರು ಸರಬರಾಜು ಯೋಜನೆ ಅನುಷ್ಠಾನಕ್ಕೆ ೧೯೩.೬೨ ಕೋಟಿ ರೂಪಾಯಿ, ಶಿಗ್ಗಾವಿ, ಬಂಕಾಪುರ ಮತ್ತು ಸವಣೂರು ಪಟ್ಟಣಗಳ ನೀರು ಸರಬರಾಜು ಯೋಜನೆಗೆ ಕಲ್ಪಿಸಲು ೧೫೭.೧೮ ಕೋಟಿ ರೂಪಾಯಿ ವೆಚ್ಚದ ಕಾಮಗಾರಿ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದರು.

*><><><*><><><*

ಉತ್ತರ ಕನ್ನಡ ಜಿಲ್ಲೆಯಲ್ಲಿ ೨೦೨೫ ನೇ ಸಾಲಿನ ಇಲ್ಲಿಯವರೆಗೆ ಎನ್.ಡಿ.ಪಿ.ಎಸ್ ಕಾಯ್ದೆ ಅಡಿಯಲ್ಲಿ ೧೩೬ ಪ್ರಕರಣಗಳನ್ನು ದಾಖಲಿಸಿದ್ದು, ಪ್ರಕರಣದಲ್ಲಿ ಭಾಗಿಯಾದ ೧೭೫ ಮಂದಿ ಆರೋಪಿತರ ವಿರುದ್ಧ ಸೂಕ್ತ ಕಾನೂನು ಅಡಿಯಲ್ಲಿ ಕ್ರಮ ಜರುಗಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಎಸ್.ದೀಪನ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಮಾದಕ ವಸ್ತುಗಳ ಸೇವನೆಯಿಂದ

ಆಗುವ ದುಷ್ಪರಿಣಾಮಗಳ ಬಗ್ಗೆ ನಿರಂತರವಾಗಿ ಸಾರ್ವಜನಿಕರಿಗೆ, ಶಾಲಾ ಕಾಲೇಜುಗಳಿಗೆ, ಶಾಲಾ ಆಡಳಿತ ಮಂಡಳಿ, ಶಿಕ್ಷಕ ವೃಂದ ಹಾಗೂ ಶಾಲಾ ಅಭಿವೃದ್ಧಿ ಕಮಿಟಿಯ ಜೊತೆ ಸಮನ್ವಯ ಸಭೆ ನಡೆಸಿ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ನೀಡಲಾಗುತ್ತಿದೆ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

*><><><*><><><*

ರಾಜ್ಯದ ಹಲವೆಡೆ ಸಾಕ್ಷರತಾ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಮಂಡ್ಯ ನಗರದ ಜಿಲ್ಲಾ ಕಾರಾಗೃಹದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಗಳ ಕಚೇರಿ, ಜಿಲ್ಲಾ ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ "ಡಿಜಿಟಲ್ ಯುಗದಲ್ಲಿ ಸಾಕ್ಷರತೆಯನ್ನು ಉತ್ತೇಜಿಸುವುದು" ಎಂಬ ವಿಷಯದಡಿ ೫೯ ನೇ ಅಂತಾರಾಷ್ಟ್ರೀಯ ಸಾಕ್ಷರತಾ ದಿನಾಚರಣೆಯನ್ನು ಮಂಡ್ಯ ಜಿಲ್ಲೆಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಜೆ. ಎನ್ ಸುಬ್ರಮಣ್ಯ ಉದ್ಘಾಟಿಸಿದರು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು, ಸಾಕ್ಷರತಾ ದಿನಾಚರಣೆಯ ಅಂಗವಾಗಿ ನಡೆಸಿದ್ದ ಪರೀಕ್ಷೆಯಲ್ಲಿ ಅನೇಕ ಸೆರೆವಾಸಿಗಳು ಉತ್ತೀರ್ಣರಾಗಿರುವುದು ಸಂತಸದ ಸಂಗತಿ, ವಿವಿಧ ಕಾರಣಗಳಿಂದ ಜೈಲಿಗೆ ಬಂದ ಹೊರ ರಾಜ್ಯದ ಕೈದಿಗಳು ಕನ್ನಡವನ್ನು ಓದಲು ಬರೆಯಲು ಕಲಿತಿರುವುದು ಹೆಮ್ಮೆಯ ವಿಷಯ. ಅಕ್ಷರವನ್ನು ಅಭ್ಯಾಸಿಸಿ ಸಾಕ್ಷರರಾಗಿ ಸಜೆಯನ್ನು ಮುಗಿಸಿ ಸಮಾಜಕ್ಕೆ ಉತ್ತಮ ವ್ಯಕ್ತಿಗಳಾಗಿ ಮರಳುವಂತೆ ಸಲಹೆ ಮಾಡಿದರು.ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ , ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಗಳ ಇಲಾಖೆ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ ಅವರು ಸಾಕ್ಷರತಾ ಧ್ವಜಾರೋಹಣ ಮಾಡುವ ಮೂಲಕ '೫೯ನೇ ಅಂತರಾಷ್ಟ್ರೀಯ ಸಾಕ್ಷರತಾ ದಿನಾಚರಣೆ'ಯನ್ನು ನೇರವೆರಿಸಿ, ಸಾಕ್ಷರತಾ ಪ್ರಮಾಣ ವಚನವನ್ನು ಬೋಧಿಸಿದರು.